## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 285 (170) |
| ಸದಸ್ಯರ ಹೆಸರು | ಶ್ರೀ ಛಲವಾದಿ ಟಿ ನಾರಾಯಣ ಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 07.07.2023 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗ್ರಾಮೀಣ ಭಾಗದ ರಸ್ತೆಗಳಲ್ಲಿ ಭಾರಿ ವಾಹನಗಳನ್ನು ಚಲಾವಣೆ ಮಾಡುವುದು. ಸರಕು ವಾಹನಗಳು ಇತ್ಯಾದಿ ವಾಹನಗಳನ್ನು ಚಲಾಯಿಸಿ ರಸ್ತೆಗಳನ್ನು ಹಾಳು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು (ವಿವರ ನೀಡುವುದು) | ಬಂದಿದೆ. ವಾಹನ ಚಾಲನೆಯ ಸಾಂದ್ರತೆಯನುಸಾರ ಹೊಸದಾಗಿ ನಿರ್ಮಾಣ ಮಾಡುವ ರಸ್ತೆಗಳಿಗೆ IRC SP-72 ರನ್ವಯ ವಿನ್ಯಾಸ ಮಾಡಿ ನಿರ್ಮಾಣಕ್ಕೆ ಅನುವು ಮಾಡಲಾಗುತ್ತಿದೆ.<br><br>ಬೆಂಗಳೂರು ನಗರ ಜಿಲ್ಲಾ ಪಂಚಾಯತಿಯ ವ್ಯಾಪ್ತಿಯಲ್ಲಿ ಭಾರಿ ವಾಹನ ಚಾಲನೆ ಮಾಡುವ ಕೆಲವು ರಸ್ತೆಗಳಿಗೆ B.M. (Bituminous Mecadam) ಡಾಂಬರು ಪದರಿಗೆ ಅವಕಾಶ ಕಲ್ಪಿಸಲಾಗಿದೆ. |
| ಆ | ಗ್ರಾಮೀಣ ಭಾಗದ ರಸ್ತೆಗಳಲ್ಲಿ ಗುಂಡಿಗಳನ್ನು ತೊಡುವುದು, ಅಗೆಯುವುದು, ಹಾಳು ಮಾಡುವುದು ಸಾಮಾನ್ಯವಾಗಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲು ಯಾರಿಗೆ ಹೊಣೆಗಾರಿಕೆಯನ್ನು ನೀಡಲಾಗುವುದು; ಇದನ್ನು ತಡೆಗಟ್ಟಲು ಸರ್ಕಾರದ ಕ್ರಮವೇನು? (ವಿವರ ನೀಡುವುದು) | ಗ್ರಾಮೀಣ ಭಾಗದ ರಸ್ತೆಗಳು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವ್ಯಾಪ್ತಿಗೆ ಬರುತ್ತವೆ.<br>ಆದ್ದರಿಂದ ಗ್ರಾಮೀಣ ಭಾಗದ ರಸ್ತೆಗಳಲ್ಲಿ ಅನಧಿಕೃತವಾಗಿ ಗುಂಡಿಗಳನ್ನು ತೊಡುವುದು, ಅಗೆಯುವುದು, ಹಾಳು ಮಾಡುವುದಕ್ಕೆ ಸಂಬಂಧಿಸಿದಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಹಾಗೂ ಉಪ ವಿಭಾಗಾಧಿಕಾರಿಗಳು ಹೊಣೆಗಾರರಾಗಿರುತ್ತಾರೆ.<br>ಅಂತಹ ಪ್ರಕರಣಗಳು ಕಂಡು ಬಂದಲ್ಲಿ ನಿಯಮಾನುಸಾರ ದುರಸ್ತಿಗೆ ತಗಲುವ ವೆಚ್ಚವನ್ನು ಸದರಿಯವರಿಂದಲೇ ಪಾವತಿಸಿಕೊಂಡು ಪಿಆರ್‌ಇಡಿ ವತಿಯಿಂದಲೇ ದುರಸ್ತಿ ಪಡಿಸಲಾಗುವುದು. |

ಸಂ: ಗ್ರಾಅಪ/ಆರ್‌ಆರ್‌ಸಿ/150ನೇಅ/LCQ,ಒ-285 (170)/2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು